ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ
ದಿನಾಂಕ : DATE : 19/9/2020

## ಮಹದಾಯಿ-ಮೇಕೆದಾಟು ಅನುಷ್ಠಾನಕ್ಕೆ ಅಡ್ಡಿ ನಿವಾರಿಸಲು ಮನವಿ

# ರಾಜ್ಯದ ಅಭಿವೃದ್ಧಿಗೆ ಕೇಂದ್ರಕ್ಕೆ ಮೊರೆ

19/9/20

**ಸಂ.ಕ. ಸಮಾಚಾರ, ನವದೆಹಲಿ**

ರಾಜ್ಯದ ಹಲವು ಮಹತ್ವದ ಯೋಜನೆಗಳು ಮತ್ತು ಅಗತ್ಯ ಅನುದಾನ ಒದಗಿಸುವ ಬಗ್ಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಮನವಿ ಮಾಡಿದ್ದಾರೆ.

ಶುಕ್ರವಾರ ಬೆಳಿಗ್ಗೆ ಸಂಸತ್ ಭವನದಲ್ಲಿ ಪ್ರಧಾನಿಯವನ್ನು ಭೇಟಿಯಾಗಿ ಸುಮಾರು 15 ನಿಮಿಷಗಳ ಕಾಲ ಸಮಾಲೋಚಿಸಿದರು. ಪ್ರಮುಖವಾಗಿ ಪ್ರವಾಹಪೀಡಿತ ಕರ್ನಾಟಕಕ್ಕೆ ರಾಷ್ಟ್ರೀಯ ವಿಪತ್ತು ನಿರ್ವಹಣೆ ಮೂಲಕ ಹೆಚ್ಚಿನ ಅನುದಾನ ಕೋರಿದ್ದಾರೆ. ಜೊತೆಗೆ ರಾಜ್ಯ ವಿಪತ್ತು ನಿರ್ವಹಣಾ ನಿಯಮ ಪರಿಷ್ಕರಣೆಗೆ ಅನುಮತಿ ನೀಡುವಂತೆಯೂ ಮನವಿ ಮಾಡಿದ್ದಾರೆ.

ಉತ್ತರ ಕರ್ನಾಟಕದ ಪ್ರಮುಖ ನೀರಾವರಿ ಯೋಜನೆಯಾದ ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಕೇಂದ್ರ ಸರ್ಕಾರ ಘೋಷಿಸುವಂತೆ ಸಿಎಂ ವಿಶೇಷವಾಗಿ ಪ್ರಧಾನಿ ಮುಂದೆ ಕೋರಿಕೆ ಸಲ್ಲಿಸಿದ್ದಾರೆ. ಅಲ್ಲದೆ ರಾಜ್ಯದ ಪ್ರಮುಖ ಕುಡಿಯುವ ನೀರಿನ ಯೋಜನೆಗಳಾದ ಮಹದಾಯಿ ಮತ್ತು ಮೇಕೆದಾಟು ಅನುಷ್ಠಾನಕ್ಕಿರುವ ಅಡ್ಡಿಯನ್ನು ನಿವಾರಿಸಿಕೊಡುವ ಮೂಲಕ ರಾಜ್ಯಕ್ಕೆ ಅನುಕೂಲ ಕಲ್ಪಿಸುವಂತೆ ಯಡಿಯೂರಪ್ಪ ಮೋದಿ ಅವರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಇದೇ ವರ್ಷದ ನವೆಂಬರ್ 19ರಂದು ಬೆಂಗಳೂರಿನಲ್ಲಿ ಆಯೋಜಿಸಲ್ಪಟ್ಟಿರುವ ಟೆಕ್‌ಸಮ್ಮಿಟ್-2020 ಉದ್ಘಾಟನೆಗೆ ಆಗಮಿಸುವಂತೆ ನರೇಂದ್ರ ಮೋದಿ ಅವರನ್ನು ರಾಜ್ಯದ ಪರವಾಗಿ ಬಿಎಸ್ವೈ ಆಹ್ವಾನಿಸಿದರು.

ಇದಾದ ಬಳಿಕ ರಾಜ್ಯದ ನಗರ ಅಭಿವೃದ್ಧಿ ಯೋಜನೆಗಳಿಗೆ ಸಂಬಂಧಿಸಿದಂತೆ [illegible] ಪ್ರಕಾಶ್ ಜಾವ್ಡೇಕರ್, ಜಲಸಂಪನ್ಮೂಲ ಸಚಿವ ಗಜೇಂದ್ರಸಿಂಗ್ ಶೆಖಾವತ್, ಪೆಟ್ರೋಲಿಯಂ ಸಚಿವ ಧರ್ಮೇಂದ್ರ ಪ್ರಧಾನ್, ನಗರಾಭಿವೃದ್ಧಿ ಸಚಿವ ಹರ್ದೀಪ್‌ಸಿಂಗ್ ಅವರನ್ನು ಪ್ರತ್ಯೇಕವಾಗಿ ಭೇಟಿಯಾಗಿ ಮನವಿ ಪತ್ರ ಸಲ್ಲಿಸಿ ಚರ್ಚೆ ನಡೆಸಿದರು. ಈ ವೇಳೆ ಲೋಕೋಪಯೋಗಿ ಸಚಿವ ಗೋವಿಂದ ಕಾರಜೋಳ, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಹಾಜರಿದ್ದರು.



**ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಕೇಂದ್ರ ಸಚಿವ ಪ್ರಕಾಶ್ ಜಾವಡೇಕರ್ ಅವರನ್ನು ಭೇಟಿ ಮಾಡಿ ಚರ್ಚಿಸಿದರು. ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್ ಉಪಸ್ಥಿತರಿದ್ದರು.**

- **ಪ್ರಧಾನಿ ಮೋದಿ ಬಳಿ ಹಲವು ಬೇಡಿಕೆ ಪ್ರಸ್ತಾಪ**
- **ಪ್ರಕೃತಿ ವಿಕೋಪ ನಿಯಮ ಪರಿಷ್ಕರಣೆಗೆ ಕೋರಿಕೆ**
- **ಕೃಷ್ಣಾ ಮೇಲ್ದಂಡೆ ರಾಷ್ಟ್ರೀಯ ಯೋಜನೆ ಘೋಷಣೆ**
- **ಬೆಂಗಳೂರು ಟೆಕ್‌ಸಮ್ಮಿಟ್ ಉದ್ಘಾಟಿಸಲು ಆಹ್ವಾನ**